# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 833
ಉತ್ತರಿಸಬೇಕಾದ ದಿನಾಂಕ : 13.03.2025
ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರ : ಮಾನ್ಯ ಮುಖ್ಯಮಂತ್ರಿಯವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕರಿಗಾಗಿ ಯಾವುದಾದರು ಯೋಜನೆಗಳು ಇವೆಯೇ: ಇದ್ದಲ್ಲಿ ಯಾವುವು ?</td><td>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕರಿಗಾಗಿ ಇರುವ ಯೋಜನೆಗಳ ವಿವರಗಳು ಈ ಕೆಳಕಂಡಂತಿವೆ:<br><br>• ಅಂತಾರಾಷ್ಟ್ರೀಯ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿರುತ್ತದೆ.<br><br>2024-25 ನೇ ಸಾಲಿನಲ್ಲಿ ಪ್ರೋತ್ಸಾಹ ಧನ ನೀಡಿದ ವಿವರ<br><table>
<tr><th>ಕ್ರ.ಸಂ</th><th>ವಿವರಗಳು</th><th>ಮೊತ್ತ</th></tr>
<tr><td>1</td><td>ಅಂತಾರಾಷ್ಟ್ರೀಯ ಪದಕ ವಿಜೇತರಿಗೆ</td><td>5.00 ಲಕ್ಷ</td></tr>
<tr><td>2</td><td>ರಾಷ್ಟ್ರೀಯ ಪದಕ ವಿಜೇತರಿಗೆ</td><td>3.00 ಲಕ್ಷ</td></tr>
<tr><td>3</td><td>ರಾಜ್ಯ ಮಟ್ಟದ ಸೀನಿಯರ್ ವಿಭಾಗದ ಪದಕ ವಿಜೇತರಿಗೆ</td><td>50,000/-</td></tr>
<tr><td>4</td><td>ರಾಜ್ಯ ಮಟ್ಟದ ಜೂನಿಯರ್ ವಿಭಾಗದ ಪದಕ ವಿಜೇತರಿಗೆ</td><td>25.000/-</td></tr>
</table><br>• ಅಂತಾರಾಷ್ಟ್ರೀಯ ಮತ್ತು, ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಅರ್ಹ 05 ಪರಿಶಿಷ್ಟ ಜಾತಿಯ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಹೊಂದಲು ಜಿಮ್ ಸ್ಥಾಪನೆಗಾಗಿ ರೂ.15.00 ಲಕ್ಷಗಳ ಸಹಾಯಧನವನ್ನು ನೀಡಲಾಗುತ್ತಿದೆ.<br><br>• ಪರಿಶಿಷ್ಟ ಜಾತಿ ಯುವಜನರಿಗಾಗಿ ವಿವಿಧ ತರಬೇತಿ ಶಿಬಿರಗಳಾದ ಜಿಮ್ ಫಿಟ್ನೆಸ್, ವಿಡಿಯೋಗ್ರಫಿ, ನಿರೂಪಣೆ ಮತ್ತು ವಾರ್ತಾ ವಾಚಕರ ತರಬೇತಿ, ಹೊಲಿಗೆ ತರಬೇತಿ, ಜಾನಪದ ತರಬೇತಿ ಹಾಗೂ ಚಾಟ್ಸ್ ತಯಾರಿಕೆ ಮುಂತಾದ ತರಬೇತಿ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ.</td></tr>
</table>

ಆ) ಸದರಿ ಇಲಾಖೆಯಲ್ಲಿ ಯುವಕರಿಗಾಗಿ ಕ್ರೀಡೆಯಲ್ಲಿ ಆಸಕ್ತಿ ವಹಿಸುವಂತೆ ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು (ಮಾಹಿತಿ ನೀಡುವುದು)

ಯುವಕರಿಗಾಗಿ ಕ್ರೀಡೆಯಲ್ಲಿ ಆಸಕ್ತಿ ವಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ:

- **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

**(ರೂ ಲಕ್ಷಗಳಲ್ಲಿ)**

| ಕ್ರ ಸ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ | 600.00 | 400.00 | 300.00 |
| 2 | ಏಷಿಯನ್ ಗೇಮ್ಸ್ | 35.00 | 25.00 | 15.00 |
| 3 | ಕಾಮನ್ ವೆಲ್ತ್ ಗೇಮ್ಸ್ | 35.00 | 25.00 | 15.00 |
| 4 | ವಿಶ್ವ ಕಪ್/ಚಾಂಪಿಯನ್‌ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

- **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಪ್ರತಿ ವರ್ಷ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ. ಈ ಪ್ರಶಸ್ತಿಯು ನಗದು ಬಹುಮಾನ ರೂ. 4,00,000/- ಗಳನ್ನು ಒಳಗೊಂಡಿರುತ್ತದೆ.
- **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಜೀವಮಾನ ಸಾಧನೆ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ. ಈ ಪ್ರಶಸ್ತಿಯು ರೂ.3.00 ಲಕ್ಷ ನಗದು ಬಹುಮಾನ ಒಳಗೊಂಡಿರುತ್ತದೆ.

| | | |
|---|---|---|
| | | • **ಕ್ರೀಡಾ ಪೋಷಕ ಪ್ರಶಸ್ತಿ:** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾ ಪೋಷಕ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ. ಈ ಪ್ರಶಸ್ತಿಯು ರೂ.10.00 ಲಕ್ಷಗಳ ನಗದು ಬಹುಮಾನ ಒಳಗೊಂಡಿರುತ್ತದೆ.<br>• **ಶೈಕ್ಷಣಿಕ ಶುಲ್ಕ ಮರುಪಾವತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಟ ರೂ 50,000/- ವರೆಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.<br>• **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ 10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.<br>• **ಸಾಮಾನ್ಯ ಪ್ರವೇಶ ಪರೀಕ್ಷೆ**: ರಾಷ್ಟ್ರ ಮತ್ತು ಅಂತರಾಷ್ಟ್ರಮಟ್ಟದಲ್ಲಿ ಅತ್ಯುನ್ನತ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಕ್ರೀಡಾ ಮೀಸಲಾತಿ ಅಡಿಯಲ್ಲಿ ಇಂಜಿನಿಯರಿಂಗ್, ವೈದ್ಯಕೀಯ ಮತ್ತು ಮುಂತಾದ ವೃತ್ತಿಪರ ಕೋರ್ಸ್ ಗಳಿಗೆ ಪ್ರವೇಶ ಕಲ್ಪಿಸಲಾಗುತ್ತಿದೆ |

ವೈಎಸ್‌ಡಿ-ಸಿಡಿಎನ್/123/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ